ಅನುದಾನ ಬಿಡುಗಡೆ

3266 (3674); ಡಾ॥ ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಕಳೆದ ಎರಡು ವರ್ಷಗಳಲ್ಲಿ ಸಾರಿಗೆ ಇಲಾಖೆ ಅಡಿ ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದೆ; (ವಿವರ ಒದಗಿಸುವುದು);

ಆ) ಈ ಕಾರ್ಯಕ್ರಮಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಅಂಕಿ ಅಂಶ ಸಮೇತ ವಿವರ ಒದಗಿಸುವುದು);

ಇ) ಗ್ರಾಮೀಣ ಭಾಗವನ್ನೇ ಹೆಚ್ಚಾಗಿ ಹೊಂದಿರುವ ಜಿಲ್ಲಾ ಕೇಂದ್ರಕ್ಕೆ ಇನ್ನಷ್ಟು ಸೌಕರ್ಯಗಳ ಅಗತ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಕೈಗೊಂಡ ಕ್ರಮ ಏನು?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಕಳೆದ ಎರಡು ವರ್ಷಗಳಲ್ಲಿ ಚಿಕ್ಕಬಳ್ಳಾಪುರ ಪ್ರಾದೇಶಿಕ ಸಾರಿಗೆ ಕಛೇರಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಾಹನ ಚಾಲನಾ ತರಬೇತಿ ನೀಡುವ ಕಾರ್ಯಕ್ರಮ ಕೈಗೊಂಡಿದೆ.

ಆ) ಕಳೆದ ಎರಡು ವರ್ಷಗಳಲ್ಲಿ ಈ ಕಾರ್ಯಕ್ರಮಗಳಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರ ಈ ಕೆಳಗಿನಂತಿದೆ.

ವರ್ಷ	ಬಿಡುಗಡೆ ಮಾಡಲಾದ ಅನುದಾನ (₹. ಗಳಲ್ಲಿ)
2013–14	62,625.00
2014–15	1,16,250.00
ಒಟ್ಟು	**1,78,875.00**

ಇ) ಹೌದು.

ಈ) ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದ ರೀತ್ಯಾ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.